ಕರ್ನಾಟಕ ಸರ್ಕಾರ

<u>ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ</u>

File No: DTE-ADMI0ACM2/31/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:13-11-2020.

**-:: ಸು ತ್ತೋ ಲೆ ::-**

**ವಿಷಯ:** 2020-21ನೇ ಸಾಲಿನ **02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ (ಸಂಜೆ) ಪಾಲಿಟೆಕ್ನಿಕ್‌ಗಳಲ್ಲಿ** ಪ್ರವೇಶ ಪಡೆಯಲು ಅಂತಿಮ ದಿನಾಂಕ ನಿಗಧಿಪಡಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ. ಇಡಿ 119 ಟಿಪಿಇ 2005, ದಿ:18-10-2005, ಸರ್ಕಾರದ ಆದೇಶ ಸಂ. ಇಡಿ 64 ಟಿಪಿಇ 2016, ದಿ:21-06-2016 & ಸರ್ಕಾರದ ಪತ್ರ ಸಂ. ಇಡಿ 101 ಟಿಪಿಇ 2018, ದಿ:30-06-2018.

-0000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಸಾಲಿನ ಸಂಜೆ ಡಿಪ್ಲೋಮಾ ವ್ಯಾಸಂಗದ 01, 02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳಿಗೆ ಕೆಳಕಂಡ ಅಂಶಗಳನ್ನು ಪರಿಗಣಿಸಿ ಪ್ರವೇಶ ನೀಡಲು ಅಂತಿಮ ದಿನಾಂಕವನ್ನು ನಿಗಧಿಪಡಿಸಲಾಗಿದೆ. ಉಲ್ಲೇಖಿತ ಸರ್ಕಾರದ ಆದೇಶಗಳ ಪ್ರಕಾರ ಪಾಲಿಟೆಕ್ನಿಕ್ ಶಿಕ್ಷಣ ಶುಲ್ಕಗಳನ್ನು ಪಾವತಿಸಿಕೊಳ್ಳುವ ಬಗ್ಗೆ ಈಗಾಗಲೇ ಮಾಹಿತಿಯನ್ನು ನೀಡಲಾಗಿರುತ್ತದೆ.

| | |
|---|---|
| 01 ನೇ ಸೆಮಿಸ್ಟರ್ ತರಗತಿಗೆ ಮರುಪ್ರವೇಶ ಹಾಗೂ 02, 04 ಮತ್ತು 06ನೇ ಸೆಮಿಸ್ಟರ್ ತರಗತಿಗಳಿಗೆ ಪ್ರವೇಶ ಹಾಗೂ ರಿಪೀಟರ್ ಪ್ರವೇಶದ ಅಂತಿಮ ದಿನಾಂಕ | ದಿನಾಂಕ: **30-11-2020** ರ ಒಳಗೆ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶ ನೀಡುವುದು. |

- ಹಿಂದಿನ ಸೆಮಿಸ್ಟರ್‌ನಲ್ಲಿ ಹಾಜರಾತಿ ಕಡಿಮೆ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.
- ಪರೀಕ್ಷಾ ದುರಾಚಾರ (Suspected Malpractice) ಎಸಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಅನುಮತಿ ಪಡೆಯದೇ ಪ್ರವೇಶ ನೀಡತಕ್ಕದ್ದಲ್ಲ.
- ಪ್ರವೇಶಾನುಮೋದನೆಯಾಗದೇ ತಡೆಹಿಡಿದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.

***ಕೋವಿಡ್-19 ಹಿನ್ನಲೆಯಲ್ಲಿ ಕರೋನಾ ಸಾಂಕ್ರಾಮಿಕ ಪಿಡುಗು ನಿಯಂತ್ರಣ ಮತ್ತು ಹರಡುವಿಕೆಯನ್ನು ತಡೆಗಟ್ಟುವಲ್ಲಿ ಅನುಸರಿಸಬೇಕಾದ ಮುನ್ನಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ*** ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳುವುದು ಹಾಗೂ ಪ್ರವೇಶ ಕೋರಿ ತಡವಾಗಿ ಸಲ್ಲಿಸುವ ಮನವಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಸಾಕಷ್ಟು ತಿಳುವಳಿಕೆ ನೀಡುವ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳುವುದು. ಈ ನಿಟ್ಟಿನಲ್ಲಿ ಯಾವುದೇ ಮನವಿಗಳನ್ನು ಇಲಾಖೆಗೆ ಕಳುಹಿಸದೆ ನಿಯಮಗಳ ಪ್ರಕಾರ ಪ್ರಿನ್ಸಿಪಾಲರ ಹಂತದಲ್ಲೇ ಇತ್ಯರ್ಥಗೊಳಿಸಬೇಕೆಂದು ತಿಳಿಸಲಾಗಿದೆ. ಒಂದು ವೇಳೆ ನಿಗಧಿತ ಅವಧಿಯ ನಂತರ ಪ್ರವೇಶ ಸಂಬಂಧ ಪ್ರಿನ್ಸಿಪಾಲರ ಹಂತದಲ್ಲಿ ಪರಿಗಣಿಸಲಾಗದ ಕೋರಿಕೆಗಳನ್ನು <u>ಇ-ಮೇಲ್ ವಿಳಾಸ</u> **<u>dteacm@hotmail.com</u>** ಗೆ ಕಳುಹಿಸಲು ತಿಳಿಸಲಾಗಿದೆ. ಶೈಕ್ಷಣಿಕ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಹೊರಡಿಸಲಾಗುವುದು.

ಆಯುಕ್ತರು

ಇವರಿಗೆ,

*ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ (ಸಂಜೆ) ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

**<u>ಪ್ರತಿ ಇವರಿಗೆ ಮಾಹಿತಿಗಾಗಿ:</u>**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರವರ ಆಪ್ತಶಾಖೆಗೆ.
4. ಕಾರ್ಯದರ್ಶಿಯವರ ಆಪ್ತಶಾಖೆಗೆ.
5. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
6. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಆರ್.ಡಿ.ಎಂ ವಿಭಾಗಗಳಿಗೆ.
8. ಇಆರ್‌ಎಸ್(3) ವಿಭಾಗಕ್ಕೆ.
9. ಕಛೇರಿ ಪ್ರತಿ.